CC No.677/2023
CW-8  PW-6

**ಪ್ರಧಾನ ವ್ಯವಹಾರ ನ್ಯಾಯಾಧೀಶರು ಮತ್ತು  ಜೆ.ಎಂ.ಎಫ್.ಸಿ ನ್ಯಾಯಾಲಯ, ಸೊರಬ**

**ಸಿ ಸಿ ನಂ.  677/2023**

**ಹೆಸರು** :- **ಶಾಂತಮ್ಮ**

**ಗಂಡನ ಹೆಸರು** :- **ಜಯಪ್ಪ**

**ವಯಸ್ಸು** :- **60 ವರ್ಷ**

**ಉದ್ಯೋಗ** :- **ಗೃಹಣಿ**

**ಸ್ಥಳ** :- **ಓಟೂರು**

**ದಿನಾಂಕಃ 10.08.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ಚಾಸಾ-1, 4 ರಿಂದ 7, 9 ಮತ್ತು 10 ರವರು ನಮ್ಮ ಪಕ್ಕದ ಮನೆಯವರಾಗಿರುವುದರಿಂದ ನನಗೆ ಪರಿಚಯ ಇರುತ್ತಾರೆ. ಸುಮಾರು 4 ವರ್ಷಗಳ ಹಿಂದೆ ರಾತ್ರಿ 8.30 ರ ಸಮಯದಲ್ಲಿ ಆರೋಪಿತರು ನಮ್ಮ ಪಕ್ಕದ ಮನೆಗೆ ಜಗಳಕ್ಕೆ ಬಂದಿರುತ್ತಾರೆ. ಅವರು ದೊಣ್ಣೆಗಳನ್ನು ತೆಗೆದುಕೊಂಡು ಬಂದು ಚಾಸಾ-4 ರಿಂದ 7, 9 ಮತ್ತು 10 ರವರಿಗೆ ಹಲ್ಲೆ ಮಾಡಿರುತ್ತಾರೆ. ಆಗ ಆರೋಪಿತರು ನಮಗೂ ಸಹ ಹಲ್ಲೆ ಮಾಡಿದ್ದು, ನಮ್ಮ ಆಂಬುಲೆನ್ಸ್ ನಲ್ಲಿ ಸೊರಬ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಚಿಕಿತ್ಸೆಗೆ ದಾಖಲಿಸಿರುತ್ತಾರೆ. ನನ್ನನ್ನು ಈ ವಿಚಾರವಾಗಿ ಪೊಲೀಸರು ವಿಚಾರಣೆ ಮಾಡಿದ್ದು, ನಾನು ಹೇಳಿಕೆ ನೀಡಿರುತ್ತೇನೆ. ಆ ದಿನ ಗಲಾಟೆ ಮಾಡಿದ ಆರೋಪಿತರನ್ನು ನೋಡಿದರೆ ನಾನು ಗುರುತಿಸುತ್ತೇನೆ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿಯು ಅಭಿಯೋಜನಾ ಪ್ರಕರಣಕ್ಕೆ ಭಾಗಶಃ ಪ್ರತಿಕೂಲ ಸಾಕ್ಷಿ ನುಡಿದ ಕಾರಣ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟಿ ಸವಾಲಿಗೆ ಅನುಮತಿ ಕೋರಿದ್ದು, ಸಾಕ್ಷಿಯು ಅಭಿಯೋಜನಾ ಪ್ರಕರಣಕ್ಕೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿದ ಕಾರಣ ಪಾಟಿ ಸವಾಲಿಗೆ ಅನುಮತಿ ನೀಡಲಾಯಿತು).**

**ಪಾಟಿ ಸವಾಲುಃ ಮಾನ್ಯ ಸ.ಸ.ಅಭಿಯೋಜಕವರಿಂದಃ**

ದಿಃ 21.06.2022 ರಂದು ಗಲಾಟೆ ನಡೆದಿರುತ್ತದೆ ಅಂದರೆ ಸರಿ. ನಾನು ಹೇಳಿದ ದಿನ ಆರೋಪಿತರು ದೊಣ್ಣೆಗಳಿಂದ ಹಲ್ಲೆ ಮಾಡಿರುವುದಿಲ್ಲ ಅಂದರೆ ಸರಿಯಲ್ಲ. 9 ಮತ್ತು 12 ನೇ ಆರೋಪಿತರು ಚಾಸಾ–5 ಮತ್ತು 6 ರವರಿಗೆ ಹಲ್ಲೆ ಮಾಡಿರುತ್ತಾರೆ. ನನಗೂ ಸಹ ಆರೋಪಿತರು ಅವಾಚ್ಯ ಶಬ್ದಗಳಿಂದ ಬೈದು, ಜೀವ ಬೆದರಿಕೆ ಹಾಕಿರುತ್ತಾರೆ ಅಂದರೆ ಸರಿ.

**ಪಾಟಿ ಸವಾಲುಃ ಆರೋಪಿ ಪರ ಶ್ರೀ. ಪಿ.ಎಸ್.ಕೆ. ವಕೀಲರಿಂದಃ**

ನಾನು, ಚಾಸಾ–2, 4, 5, 7, 9 ಮತ್ತು 10 ರವರು ಒಂದೇ ಮನೆತನದವರು ಅಂದರೆ ಸರಿಯಲ್ಲ. ಸ.ನಂ.337 12 ನೇ ಆರೋಪಿಗೆ ಸೇರಿದ ಜಮೀನು ಅಂದರೆ ನನಗೆ ಗೊತ್ತಿಲ್ಲ. ಸ.ನಂ.8 ನನ್ನ ಕುಟುಂಬಕ್ಕೆ ಸಂಬಂಧಿಸಿದ ಜಮೀನು ಅಂದರೆ ಸರಿ, ಸದರಿ ಸರ್ವೆ ನಂಬರ್ ಗಳು ಅಕ್ಕಪಕ್ಕದ ಜಮೀನುಗಳು ಅಂದರೆ ನನಗೆ ಗೊತ್ತಿಲ್ಲ, ಸ.ನಂ.337 ಕ್ಕೆ ಸಂಬಂಧಿಸಿದಂತೆ ಆರೋಪಿತರ ಹಾಗೂ ಚಾಸಾ–2 ರಿಂದ 10 ರವರ ನಡುವೆ ಹಲವಾರು ಸಿವಿಲ್ ಮತ್ತು ಕ್ರಿಮಿನಲ್ ಪ್ರಕರಣಗಳು ಇವೆ ಅಂದರೆ ನನಗೆ ಗೊತ್ತಿಲ್ಲ. ಸದರಿ ಸ.ನಂ.337 ಕ್ಕೆ ಸಂಬಂಧಿಸಿದಂತೆ ಚಾಸಾ–2 ರಿಂದ 10 ರವರು ಆರೋಪಿತರ ಮೇಲೆ

ಆಗಾಗ ಹಲ್ಲೆ ಮಾಡುತ್ತಿದ್ದರು ಅಂದರೆ ಸರಿಯಲ್ಲ. ಆ ಸಂಬಂಧ ನಮ್ಮ ಕುಟುಂಬದವರ ಮೇಲೆ ಹಲವಾರು ಕ್ರಿಮಿನಲ್ ಮೊಕದ್ದಮೆಗಳು ದಾಖಲಾಗಿವೆ ಅಂದರೆ ಸರಿ. ಸ.ನಂ.337 ರಲ್ಲಿ ರವಿ ಮತ್ತು ಕೃಷ್ಣಪ್ಪ ರವರು ಅಕ್ರಮವಾಗಿ ಪ್ರವೇಶಿಸಿ ದನಗಳನ್ನು ಮೇಯಿಸುತ್ತಿದ್ದರು ಅಂದರೆ ನನಗೆ ಗೊತ್ತಿಲ್ಲ. ಆ ಕಾರಣ 1 ಮತ್ತು 12 ನೇ ಆರೋಪಿತರು ಪ್ರಶ್ನೆ ಮಾಡಿದ್ದಕ್ಕೆ ಹಲ್ಲೆ ಮಾಡಿರುತ್ತಾರೆ ಅಂದರೆ ನನಗೆ ಗೊತ್ತಿಲ್ಲ. 12 ನೇ ಆರೋಪಿತಳಿಗೆ ಕೈಯಿಂದ ಹಲ್ಲೆ ಮಾಡಿ, ನೆಲಕ್ಕೆ ಕೆಡವಿರುತ್ತೀರಿ ಅಂದರೆ ಸರಿಯಲ್ಲ. ನಾವೇ ಆರೋಪಿತರ ಮೇಲೆ ಗಲಾಟೆ ಮಾಡಿ, ಹಲ್ಲೆ ಮಾಡಿ ಅವರ ವಿರುದ್ದ ಸುಳ್ಳು ಪ್ರಕರಣವನ್ನು ದಾಖಲಿಸಿರುತ್ತೀರಿ ಅಂದರೆ ಸರಿಯಲ್ಲ. ಆರೋಪಿತರು ಯಾವುದೇ ಕಾಲಕ್ಕೆ ಹಲ್ಲೆ ಮಾಡಿರುವುದಿಲ್ಲ ಅಂದರೆ ಸರಿಯಲ್ಲ. ಆರೋಪಿತರು ಯಾವುದೇ ಗಲಾಟೆ ಮಾಡದೇ ಇದ್ದರೂ ಅವರ ವಿರುದ್ದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಿ ಅಂದರೆ ಸರಿಯಲ್ಲ. ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಿ ಅಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲಃ**

**(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ರೀತ್ಯಾ ಕಂಪ್ಯೂಟರೀಕರಿಸಲಾಯ್ತು).**

**ಓ.ಹೇ.ಕೇ. ಸರಿ ಇದೆ ಎಂದು ಒಪ್ಪಿದ್ದಾರೆ.**

**ಪ್ರಧಾನ ವ್ಯವಹಾರ ನ್ಯಾ ಮತ್ತು ಜೆ.ಎಂ.ಎಫ್.ಸಿ**
**ಸೊರಬ.**